ಪ್ರದೇಶ ಸಮಾಚಾರ

16.12.2025 2.30 p.m.

<><><><>

ಮುಖ್ಯಾಂಶಗಳು

- ಮಳವಳ್ಳಿಯಲ್ಲಿ ಇಂದು ಶಿವರಾತ್ರಿ ಶಿವಯೋಗಿಗಳ ಸಾವಿರದ ೬೬ನೇ ಜಯಂತಿ ಮಹೋತ್ಸವಕ್ಕೆ ರಾಷ್ಟ್ರಪತಿ ದ್ರೌಪದಿ ಮುರ್ಮು ಚಾಲನೆ
- ಹೈಕಮಾಂಡ್ ಹೇಳುವವರೆಗೂ ತಾನೇ ಮುಖ್ಯಮಂತ್ರಿ ; ವಿಧಾನಸಭೆಯಲ್ಲಿ ಮುಖ್ಯಮಂತ್ರಿ ಸಿದ್ದರಾಮಯ್ಯ ಸ್ಪಷ್ಟನೆ
- ರಾಜ್ಯದ ವಿವಿಧೆಡೆ ಕೈಗಾರಿಕೆ ಸ್ಥಾಪಿಸಲು ಬದ್ಧ ; ಕೇಂದ್ರ ಸಚಿವ ಹೆಚ್.ಡಿ. ಕುಮಾರಸ್ವಾಮಿ
- ರಾಜ್ಯದಲ್ಲಿ ೬ ಸಾವಿರದ ೩೯೫ ಆನೆಗಳು, ೫೬೩ ಹುಲಿಗಳು ; ಪರಿಷತ್‌ನಲ್ಲಿ ಸಚಿವ ಈಶ್ವರ್ ಬಿ. ಖಂಡ್ರೆ ಸ್ಪಷ್ಟನೆ
- ಭ್ರೂಣಹತ್ಯೆ ತಡೆಗೆ ಎಲ್ಲಾ ಜಿಲ್ಲೆಗಳಲ್ಲಿ ಪ್ರತ್ಯೇಕ ನೋಡಲ್ ಅಧಿಕಾರಿ ನೇಮಕ - ಸಚಿವ ದಿನೇಶ್ ಗುಂಡೂರಾವ್

<><><><>

ಮಂಡ್ಯ ಜಿಲ್ಲೆಯ ಮಳವಳ್ಳಿ ಪಟ್ಟಣದಲ್ಲಿ ಇಂದು ಸುತ್ತೂರಿನ ಆದಿ ಜಗದ್ಗುರು ಶಿವರಾತ್ರಿ ಶಿವಯೋಗಿಗಳ ಸಾವಿರದ ೬೬ನೇ ಜಯಂತಿ ಮಹೋತ್ಸವಕ್ಕೆ ರಾಷ್ಟ್ರಪತಿ ದ್ರೌಪದಿ ಮುರ್ಮು ಚಾಲನೆ ನೀಡಲಿದ್ದಾರೆ. ಕಾರ್ಯಕ್ರಮದಲ್ಲಿ ರಾಜ್ಯಪಾಲ ಥಾವರ್ ಚಂದ್ ಗೆಹ್ಲೋಟ್, ಕೇಂದ್ರದ ಉಕ್ಕು ಹಾಗೂ ಬೃಹತ್ ಕೈಗಾರಿಕಾ ಸಚಿವ ಹೆಚ್.ಡಿ.ಕುಮಾರಸ್ವಾಮಿ, ಜಿಲ್ಲಾ ಉಸ್ತುವಾರಿ ಸಚಿವ ಎನ್.ಚಲುವರಾಯಸ್ವಾಮಿ, ಸೇರಿದಂತೆ ಹಲವು ಗಣ್ಯರು ಭಾಗಿಯಾಗಲಿದ್ದಾರೆ. ರಾಷ್ಟ್ರಪತಿ ಆಗಮನದ ಹಿನ್ನಲೆಯಲ್ಲಿ ಪೊಲೀಸ್ ಇಲಾಖೆ ಮತ್ತು ಮಂಡ್ಯ ಜಿಲ್ಲಾಡಳಿತ ಕಟ್ಟೆಚ್ಚರ ವಹಿಸಿದೆ.

<><><><>

ಹೈಕಮಾಂಡ್ ಹೇಳುವವರೆಗೂ ತಾನೇ ಮುಖ್ಯಮಂತ್ರಿ ಎಂದು ವಿಧಾನಸಭೆಯಲ್ಲಿ ಮುಖ್ಯಮಂತ್ರಿ ಸಿದ್ದರಾಮಯ್ಯ ಸ್ಪಷ್ಟಪಡಿಸಿದ್ದಾರೆ. ಮುಖ್ಯಮಂತ್ರಿ ಬದಲಾವಣೆ, ೫ ವರ್ಷ ಅಧಿಕಾರದ ಬಗ್ಗೆ ಸದನದಲ್ಲಿಂದು ಆಡಳಿತ ಹಾಗೂ ಪ್ರತಿಪಕ್ಷಗಳ ನಡುವೆ ಸ್ವಾರಸ್ಯಕರ ಚರ್ಚೆ ನಡೆಯಿತು. ನೀವೇ ಐದು ವರ್ಷ ಮುಖ್ಯಮಂತ್ರಿ ಆಗಿರುತ್ತೀರಾ ಎಂಬ ಪ್ರತಿಪಕ್ಷ ನಾಯಕ ಆರ್. ಅಶೋಕ ಅವರ ಪ್ರಶ್ನೆಗೆ ಉತ್ತರಿಸಿದ ಮುಖ್ಯಮಂತ್ರಿ ಸಿದ್ದರಾಮಯ್ಯ ಹೈಕಮಾಂಡ್ ಹೇಳುವವರೆಗೂ ನಾನೇ ಮುಖ್ಯಮಂತ್ರಿ ಎಂದು ಉತ್ತರಿಸಿದ್ದಾರೆ. ೨೦೨೩ ರಂತೆ ೨೦೨೮ರಲ್ಲಿಯೂ ಜನಾಶೀರ್ವಾದದೊಂದಿಗೆ ಕಾಂಗ್ರೆಸ್ ಮತ್ತೆ ಅಧಿಕಾರಕ್ಕೆ ಬರಲಿದೆ. ಬಿಜೆಪಿಯವರು ಸದಾ ವಿರೋಧಪಕ್ಷದ ಸ್ಥಾನದಲ್ಲಿಯೇ ಇರಲಿದ್ದಾರೆ ಎಂದು ಹೇಳಿದ್ದಾರೆ. ಉರಿಯುವುದರ ಮೇಲೆ ಉಪ್ಪು ಹಾಕಬಾರದೆಂಬ ಗಾದೆ ಮಾತಿದೆ. ಆದರೆ, ವಿರೋಧಪಕ್ಷದವರು ಯಾವಾಗಲೂ ಉರಿಯುವುದರ ಮೇಲೆ ಉಪ್ಪು ಸುರಿಯುತ್ತಿದ್ದಾರೆ ಎಂದು ತಿಳಿಸಿದರು. ಇದೇ ವೇಳೆ ಕಾಂಗ್ರೆಸ್ ಶಾಸಕ ಹೆಚ್.ಡಿ. ರಂಗನಾಥ್ ಅವರ ಚುಕ್ಕೆ ಗುರುತಿನ ಪ್ರಶ್ನೆಗೆ ಉತ್ತರಿಸಿದ ಅವರು, ಕುಣಿಗಲ್ ತಾಲೂಕಿನಲ್ಲಿ ಸಹಕಾರಿ ರಂಗಕ್ಕೆ ಅನುದಾನ ನೀಡಿಕೆಯಲ್ಲಿ ತಾರತಮ್ಯವಾಗಿದ್ದಲ್ಲಿ ಮುಂದಿನ ವರ್ಷದಿಂದ ನಿವಾರಿಸಲಾಗುವುದು ಎಂದು ಭರವಸೆ ನೀಡಿದ್ದಾರೆ.

<><><><>

ಗ್ರೇಟರ್ ಬೆಂಗಳೂರು ಆಡಳಿತ ವಿಧೇಯಕಕ್ಕೆ ವಿಧಾನಸಭೆಯಲ್ಲಿಂದು ಅಂಗೀಕಾರ ದೊರೆತಿದೆ. ಬೆಂಗಳೂರು ನಗರಾಭಿವೃದ್ಧಿ ಸಚಿವರಾಗಿರುವ ಡಿ.ಕೆ. ಶಿವಕುಮಾರ್, ವಿಧೇಯಕ ಮಂಡಿಸಿ ಮಾತನಾಡಿ, ಪರಿಷತ್ ಸದಸ್ಯರು ಸ್ಥಳೀಯ ಸಂಸ್ಥೆಗಳ ಪ್ರತಿನಿಧಿಗಳನ್ನು ಜಿಬಿಎ ಸದಸ್ಯರನ್ನಾಗಿ ಸೇರಿಸಲು ಈ ತಿದ್ದುಪಡಿ ತರಲಾಗಿದೆ ಎಂದು ಹೇಳಿದರು.

<><><><>

ಪೊಲೀಸ್ ಇಲಾಖೆಯಲ್ಲಿ ಖಾಲಿ ಇರುವ ಪೊಲೀಸ್ ಸಬ್ ಇನ್ಸ್‌ಪೆಕ್ಟರ್ ಹುದ್ದೆಗಳನ್ನು ಹಂತ ಹಂತವಾಗಿ ಭರ್ತಿ ಮಾಡಲಾಗುತ್ತಿದ್ದು, ಹೊಸದಾಗಿ ೬೦೦ ಹುದ್ದೆಗಳ ನೇಮಕಾತಿಗೆ ಆರ್ಥಿಕ ಇಲಾಖೆ ಅನುಮೋದನೆ ಪಡೆಯಲಾಗಿದೆ. ಶೀಘ್ರವೇ ನೇಮಕಾತಿ ಆರಂಭಿಸುವುದಾಗಿ ಗೃಹ ಸಚಿವ ಡಾ.ಜಿ.ಪರಮೇಶ್ವರ್ ವಿಧಾನಸಭೆಯಲ್ಲಿ ತಿಳಿಸಿದ್ದಾರೆ. ಪ್ರಶ್ನೋತ್ತರದ ಅವಧಿಯಲ್ಲಿ ಸದಸ್ಯ ಚನ್ನಬಸಪ್ಪ, ಅವರ ಪ್ರಶ್ನೆಗೆ ಉತ್ತರಿಸಿದ ಸಚಿವ ಪರಮೇಶ್ವರ್, ಶಿವಮೊಗ್ಗ ಜಿಲ್ಲೆಯಲ್ಲಿ ೩೩ ಪೊಲೀಸ್ ಠಾಣೆಗಳಿವೆ. ೧ ಸಾವಿರದ ೫೪೯ ಹುದ್ದೆಗಳು ಮಂಜೂರಾಗಿವೆ. ೧ ಸಾವಿರದ ೩೯೪ ಸಿಬ್ಬಂದಿ ಕೆಲಸ ಮಾಡುತ್ತಿದ್ದಾರೆ, ೧೫೫ ಹುದ್ದೆಗಳು ಖಾಲಿ ಇವೆ ಎಂದು ಹೇಳಿದರು. ಶಿವಮೊಗ್ಗ ಜಿಲ್ಲೆಗೆ ಬಾಕಿ ಇರುವ ೧೦ ಹುದ್ದೆಗಳನ್ನು ಮುಂದಿನ ನೇಮಕಾತಿಯಲ್ಲಿ ನಿಯೋಜಿಸುವುದಾಗಿ ಭರವಸೆ ನೀಡಿದರು. ಮಲೆನಾಡು ಹಾಗೂ ಕರಾವಳಿಯಲ್ಲಿ ವಿಶೇಷ ಪೊಲೀಸ್ ಪಡೆ ನಿಯೋಜಿಸಲಾಗಿದ್ದು, ಇದರಿಂದ ಅಪರಾಧಗಳು ಕಡಿಮೆಯಾಗಿವೆ ಎಂದು ತಿಳಿಸಿದರು.

<><><><>

ಕೇಂದ್ರ ಸರ್ಕಾರದ ಸಹಕಾರದೊಂದಿಗೆ ಮಂಡ್ಯ ಜಿಲ್ಲೆ ಸೇರಿದಂತೆ ರಾಜ್ಯದ ವಿವಿಧೆಡೆ ಕೈಗಾರಿಕೆಗಳನ್ನು ಸ್ಥಾಪಿಸಲಾಗುವುದು ಎಂದು ಕೇಂದ್ರ ಉಕ್ಕು ಹಾಗೂ ಭಾರೀ ಕೈಗಾರಿಕಾ ಸಚಿವ ಹೆಚ್.ಡಿ.ಕುಮಾರಸ್ವಾಮಿ ತಿಳಿಸಿದ್ದಾರೆ. ಇದಕ್ಕೆ ಪೂರಕವಾಗಿ ರಾಜ್ಯ ಸರ್ಕಾರ ಸಹಕಾರ ನೀಡಬೇಕೆಂದು ಹೇಳಿದ್ದಾರೆ. ಮಂಡ್ಯ ಜಿಲ್ಲೆಯ ಸಂಸದರಾಗಿ ಹಾಗೂ ಕೇಂದ್ರ ಸಚಿವರಾಗಿ ತಮ್ಮ ಮೇಲೆ ಜವಾಬ್ದಾರಿ ಹೆಚ್ಚಿದ್ದು, ಜನರ ನಿರೀಕ್ಷೆಯಂತೆ ಕೆಲಸ ಮಾಡಲು ನಾನು ಬದ್ಧನಿದ್ದೇನೆ ಎಂದು ಕುಮಾರಸ್ವಾಮಿ ಸ್ಪಷ್ಟಪಡಿಸಿದ್ದಾರೆ.

<><><><>

ರಾಜ್ಯದಲ್ಲಿರುವ ವನ್ಯ ಜೀವಿಧಾಮಗಳು ಮತ್ತು ರಾಷ್ಟ್ರೀಯ ಉದ್ಯಾನವನಗಳಲ್ಲಿ ಒಟ್ಟು ೬ ಸಾವಿರದ ೩೯೫ ಆನೆಗಳು ಮತ್ತು ೫೬೩ ಹುಲಿಗಳಿವೆ ಎಂದು ಅರಣ್ಯ ಸಚಿವ ಈಶ್ವರ್ ಬಿ. ಖಂಡ್ರೆ ವಿಧಾನ ಪರಿಷತ್‌ನಲ್ಲಿ ತಿಳಿಸಿದ್ದಾರೆ. ಸದಸ್ಯ ಡಾ. ತಿಮ್ಮಯ್ಯ ಅವರ ಪ್ರಶ್ನೆಗೆ ಉತ್ತರಿಸಿದ ಸಚಿವರು, ವನ್ಯ ಜೀವಿಗಳು ಅರಣ್ಯ ಪ್ರದೇಶದಿಂದ ಹೊರ ಬರುವುದನ್ನು ತಡೆಗಟ್ಟಲು ಮಾನವ ಪ್ರಾಣಹಾನಿಗೆ ಕಾರಣವಾದ ಹುಲಿ ಹಾಗೂ ಆನೆಯನ್ನು ನಿರ್ದಿಷ್ಟವಾಗಿ ಗುರುತಿಸಿ ಸೆರೆಹಿಡಿಯಲಾಗಿದೆ ಎಂದು ಹೇಳಿದ್ದಾರೆ. ಕಾಡಾನೆಗಳು ಅರಣ್ಯ ಪ್ರದೇಶದಿಂದ ಹೊರಗೆ ಬಾರದಂತೆ ತಡೆಗಟ್ಟಲು ಅರಣ್ಯದಂಚಿನಲ್ಲಿ ಸೌರಶಕ್ತಿ ಬೇಲಿ ನಿರ್ಮಾಣ, ಆನೆತಡೆ ಕಂದಕ ನಿರ್ಮಾಣ ಮಾಡಲಾಗುತ್ತಿದೆ ಎಂದು ಸ್ಪಷ್ಟಪಡಿಸಿದ್ದಾರೆ.

<><><><>

ಅವಧಿ ಮುಕ್ತಾಯಗೊಂಡಿರುವ ನಗರ ಸ್ಥಳೀಯ ಸಂಸ್ಥೆಗಳಿಗೆ ವಾರ್ಡ್‌ವಾರು ಮೀಸಲಾತಿಯನ್ನು ನಿಗದಿಪಡಿಸುವ ಪ್ರಕ್ರಿಯೆ ಪ್ರಗತಿಯಲ್ಲಿದೆ ಎಂದು ಪೌರಾಡಳಿತ ಮತ್ತು ಹಜ್ ಸಚಿವ ರಹೀಂ ಖಾನ್ ವಿಧಾನ ಪರಿಷತ್ ನಲ್ಲಿ ಇಂದು ತಿಳಿಸಿದ್ದಾರೆ. ಪ್ರಶ್ನೋತ್ತರ ಕಲಾಪದಲ್ಲಿ ಸದಸ್ಯ ಪ್ರತಾಪ್ ಸಿಂಹ ನಾಯಕ ಅವರ ಪ್ರಶ್ನೆಗೆ ಉತ್ತರಿಸಿದ ಸಚಿವರು, ಅವಧಿ ಮುಕ್ತಾಯಗೊಂಡಿರುವ ಸ್ಥಳೀಯ ಸಂಸ್ಥೆಗಳಲ್ಲಿ ಹೊಸದಾಗಿ ಚುನಾಯಿತ ಕೌನ್ಸಿಲ್ ಅಸ್ತಿತ್ವಕ್ಕೆ ಬರುವವರೆಗೂ ಅವುಗಳ ದಿನನಿತ್ಯದ ಕಾರ್ಯನಿರ್ವಹಣೆಗಾಗಿ ಆಡಳಿತಾಧಿಕಾರಿಗಳನ್ನು ನೇಮಕ ಮಾಡಲಾಗಿದೆ ಎಂದು ಸ್ಪಷ್ಟಪಡಿಸಿದ್ದಾರೆ. ದಕ್ಷಿಣ ಕನ್ನಡ ಜಿಲ್ಲೆಯ ಉಳ್ಳಾಲ, ಪುತ್ತೂರು, ಬಂಟ್ವಾಳ, ಮೂಡಬಿದ್ರೆ, ಬೆಳ್ತಂಗಡಿ, ಸುಳ್ಯ ಮತ್ತು ಮುಲ್ಕಿ ನಗರ ಸ್ಥಳೀಯ ಸಂಸ್ಥೆಗಳಿಗೆ ಈಗಾಗಲೇ ಆಡಳಿತಾಧಿಕಾರಿಗಳನ್ನು ನೇಮಕ ಮಾಡಲಾಗಿದೆ ಎಂದು ಸಚಿವರು ಮಾಹಿತಿ ನೀಡಿದ್ದಾರೆ.

<><><>

ಬೆಂಗಳೂರು ವ್ಯಾಪ್ತಿಯಲ್ಲಿ ಗ್ರಾಹಕರಿಗೆ ಮೋಸ ಮಾಡಿ ವಸ್ತುಗಳನ್ನು ಮಾರಾಟ ಮಾಡುತ್ತಿದ್ದ ೨ ಸಾವಿರದ ೩೩೪ ಕಂಪನಿಗಳ ವಿರುದ್ಧ ಪ್ರಕರಣ ದಾಖಲಾಗಿದೆ ಎಂದು ಆಹಾರ ಮತ್ತು  ಗ್ರಾಹಕ ವ್ಯವಹಾರಗಳ ಸಚಿವ ಕೆ.ಹೆಚ್. ಮುನಿಯಪ್ಪ ತಿಳಿಸಿದ್ದಾರೆ. ಸದಸ್ಯ ಸಿಟಿ ರವಿ ಪ್ರಶ್ನೆಗೆ ಉತ್ತರಿಸಿದ ಆರೋಗ್ಯ ಸಚಿವ ದಿನೇಶ್ ಗುಂಡೂರಾವ್, ಭ್ರೂಣಹತ್ಯೆ ತಡೆಗೆ ಎಲ್ಲ ಜಿಲ್ಲೆಗಳಲ್ಲಿ ಪ್ರತ್ಯೇಕ ನೋಡಲ್ ಅಧಿಕಾರಿ ನೇಮಕ ಮಾಡಲಾಗುವುದು ಎಂದು ಸ್ಪಷ್ಟಪಡಿಸಿದ್ದಾರೆ. ಐಸಿಎಸ್‌ಇ, ಸಿಬಿಎಸ್‌ಇ ಹಾಗೂ ಇನ್ನಿತರ ಪಠ್ಯಕ್ರಮ ಬೋಧಿಸುವ ಶಿಕ್ಷಣ ಸಂಸ್ಥೆಗಳಲ್ಲಿ ಕಡ್ಡಯವಾಗಿ ಭಾಷೆ ಕಲಿಕೆಗೆ ಒತ್ತು ನೀಡಲು ಸೂಚನೆ ನೀಡಲಾಗಿದೆ ಎಂದು ಶಾಲಾ ಶಿಕ್ಷಣ ಸಚಿವ ಮಧು ಬಂಗಾರಪ್ಪ ತಿಳಿಸಿದ್ದಾರೆ.

<><><>

ಕರ್ನಾಟಕ ಸಂಗೀತ ನೃತ್ಯ ಅಕಾಡೆಮಿ, ಕನ್ನಡ ಮತ್ತು ಸಂಸ್ಕೃತಿ ಇಲಾಖೆ ವತಿಯಿಂದ ೨೦೨೫-೨೬ನೇ ಸಾಲಿನಲ್ಲಿ ಮೂರು ದಿನಗಳ ಹಿಂದೂಸ್ತಾನಿ ಶಾಸ್ತ್ರೀಯ ಸಂಗೀತ, ಸುಗಮ ಸಂಗೀತ, ಕಥಕ್ ನೃತ್ಯ ಕಾರ್ಯಗಾರವನ್ನು ಹಮ್ಮಿಕೊಳ್ಳಲಾಗಿದೆ. ಕರ್ನಾಟಕ ವಿಶ್ವವಿದ್ಯಾಲಯ ಧಾರವಾಡದಲ್ಲಿ ನಡೆಯುತ್ತಿರುವ ಸಮಾರಂಭವನ್ನು ಶಾಸಕ ಅರವಿಂದ ಬೆಲ್ಲದ ಉದ್ಘಾಟಿಸಲಿದ್ದಾರೆ. ಇದೇ ೧೯, ೨೦ ಮತ್ತು ೨೧ ರಂದು ಬೆಳಗ್ಗೆ ೧೦.೩೦ರಿಂದ ಸಂಜೆ ೫ರವರೆಗೆ ಕಾರ್ಯಕ್ರಮ ನಡೆಯಲಿದೆ.

<><><>

ಕರಾವಳಿ ಕರ್ನಾಟಕದ ಪ್ರಮುಖ ಪ್ರದೇಶಗಳಾದ, ಮಡಗಾಂವ್, ಕಾರವಾರ, ಉಡುಪಿ, ಮತ್ತು  ಮಂಗಳೂರನ್ನು ಬೆಂಗಳೂರಿನೊಂದಿಗೆ ಸಂಪರ್ಕಿಸಲು ವಂದೇ ಭಾರತ್ ಎಕ್ಸ್‌ಪ್ರೆಸ್ ಸೇವೆಯನ್ನು  ಆರಂಭಿಸುವಂತೆ ಕೇಂದ್ರ ಸರ್ಕಾರಕ್ಕೆ ಮನವಿ ಮಾಡಲಾಗಿದೆ. ಕೇಂದ್ರ ರೈಲ್ವೆ ಸಚಿವ ಅಶ್ವಿನಿ ವೈಷ್ಣವ್ ಅವರನ್ನು ಉತ್ತರಕನ್ನಡ ಸಂಸದ ವಿಶ್ವೇಶ್ವರ ಹೆಗಡೆ ಕಾಗೇರಿ ಭೇಟಿಯಾಗಿ ಮನವಿ ಸಲ್ಲಿಸಿದ್ದಾರೆ. ಮನವಿಗೆ ಸಕಾರಾತ್ಮಕವಾಗಿ ಸ್ಪಂದಿಸಿದ ಸಚಿವರು ಸಕಲೇಶಪುರ  ಘಾಟ್ ನಡುವೆ ವಿದ್ಯುದ್ಧಿಕರಣ ಕಾಮಗಾರಿ ಪರೀಕ್ಷಾರ್ಥ ಹಂತದಲ್ಲಿದ್ದು, ಪರೀಕ್ಷೆ ಪೂರ್ಣಗೊಂಡ ತಕ್ಷಣ  ಈ ಸೇವೆಯನ್ನು ಪ್ರಾರಂಭಿಸುವ ಭರವಸೆ ನೀಡಿದ್ದಾರೆ ಎಂದು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

<><><>

ಚಿಕ್ಕಮಗಳೂರು ಜಿಲ್ಲೆಯ ನರಸಿಂಹರಾಜಪುರ ಪಟ್ಟಣಕ್ಕೆ ಮುತ್ತಿನಕೊಪ್ಪ ಸಮೀಪದ ತುಂಗಾನದಿಯಿಂದ ಶಾಶ್ವತ ಕುಡಿಯುವ ನೀರು ಪೂರೈಕೆ ಯೋಜನೆಗೆ ೧೬ ಕೋಟಿ ೫೦ ಲಕ್ಷ ರೂಪಾಯಿ ಮಂಜೂರಾಗಿದ್ದು ಕಾಮಗಾರಿ ಅರಂಭಿಸಲಾಗಿದೆ ಎಂದು ಶೃಂಗೇರಿ ಕ್ಷೇತ್ರದ ಶಾಸಕ ಟಿ.ಡಿ ರಾಜೇಗೌಡ ತಿಳಿಸಿದ್ದಾರೆ. ಈ ಬಗ್ಗೆ ಪತ್ರಿಕಾ ಹೇಳಿಕೆ ನೀಡಿರುವ ಅವರು, ತಾಲೂಕು ಕೇಂದ್ರವಾದ ನರಸಿಂಹರಾಜಪುರ ಪಟ್ಟಣಕ್ಕೆ ಕುಡಿಯುವ ನೀರಿನ ಅವಶ್ಯಕತೆ ಅಧಿಕವಾಗಿದ್ದು ೨೦೫೫ರ ಜನಸಂಖ್ಯೆಯ ಅಧಾರದಲ್ಲಿ ಕಾಮಾಗಾರಿ ನಡೆಸಲಾಗುತ್ತಿದೆ. ಕೇಂದ್ರ ಪುರಸ್ಕೃತ ಅಮೃತ್ ೨.೦ ಯೋಜನೆಯಡಿಯಲ್ಲಿ ಕೇಂದ್ರ ಸರ್ಕಾರ ಶೇಕಡ ೫೦ ರಷ್ಟು ರಾಜ್ಯ ಸರ್ಕಾರ ಶೇಕಡ ೪೦ರಷ್ಟು ಹಾಗೂ ಪಟ್ಟಣಪಂಚಾಯಿತಿ ಶೇಕಡ ೧೦ ರಷ್ಟು ಅನುದಾನ ನೀಡಲಿದೆ ಎಂದು ಹೇಳಿದ್ದಾರೆ.

<><><>

"ನೀರಿನ ಲಭ್ಯತೆ ಆಧಾರದ ಮೇಲೆ ಹೊರ್ತಿ ರೇವಣ ಸಿದ್ದೇಶ್ವರ ಏತ ನೀರಾವರಿ ಯೋಜನೆ ಎರಡನೇ ಹಂತ ಜಾರಿಗೊಳಿಸಲಾಗುವುದು" ಎಂದು ಉಪಮುಖ್ಯಮಂತ್ರಿ ಡಿ.ಕೆ. ಶಿವಕುಮಾರ್ ತಿಳಿಸಿದ್ದಾರೆ. ವಿಧಾನಸಭೆಯ ಪ್ರಶ್ನೋತ್ತರ ಕಲಾಪದಲ್ಲಿ ಕಾಂಗ್ರೆಸ್ ಸದಸ್ಯ ವಿಠ್ಠಲದೊಂಡಿಬಾ ಅವರ ಪ್ರಶ್ನೆಗೆ ಉತ್ತರಿಸಿದ ಅವರು, ಮಾತನಾಡಿದರು.

<><> ಇಲ್ಲಿಗೆ ಪ್ರದೇಶ ಸಮಾಚಾರ ಮುಗಿಯಿತು <><>